# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: "2019-20ನೇ ಸಾಲಿನ RKVY ಯೋಜನೆಯಡಿ ಮೊದಲನೇ ಕಂತಿನ ಉಳಿಕೆ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2019, ದಿನಾಂಕ: 02.04.2019.
2) ದಿನಾಂಕ:30.04.2019ರಂದು ನಡೆದ 20ನೇ RKVY ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಸಭೆಯ ನಡವಳಿ.
3) ದಿನಾಂಕ:04.10.2019ರಂದು ನಡೆದ 21ನೇ RKVY ರಾಜ್ಯ ಮಟ್ಟದ ಮಂಜೂರಾತಿ ಸಮಿತಿ ಸಭೆಯ ನಡವಳಿ.
4) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 1-12/2019-RKVY/1,2,3 ದಿನಾಂಕ: 20.11.2019.
5) ಸರ್ಕಾರದ ಆದೇಶ ಸಮ ಸಂಖ್ಯೆಯ ದಿನಾಂಕ:30.07.2019
6) ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: RKVY/GOK/2019-20, ದಿನಾಂಕ: 22.11.2019.

*****

**ಪ್ರಸ್ತಾವನೆ:**

2019-20ನೇ ಸಾಲಿನ ಆಯವ್ಯಯ ಸಂಪುಟ-3 ರಲ್ಲಿ ಕೇಂದ್ರ ಪುರಸ್ಕೃತ ಯೋಜನೆಯ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಲೆಕ್ಕ ಶೀರ್ಷಿಕೆ: 2401-00-800-1-57 ಅಡಿ ಒಟ್ಟು ರೂ.198.00 ಕೋಟಿಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (1)ರ ಆದೇಶದಲ್ಲಿ ಕೇಂದ್ರ ಪುರಸ್ಕೃತ ಯೋಜನೆಯ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ನಡವಳಿಯನ್ವಯ ದಿನಾಂಕ:30.04.2019ರಂದು ನಡೆದ 20ನೇ ರಾಜ್ಯ ಮಟ್ಟದ ಮಂಜೂರಾತಿ ಸಭೆಯಲ್ಲಿ ರೂ163.974 ಕೋಟಿಗಳಿಗೆ ವಿವಿಧ ಇಲಾಖೆ/ ಸಂಸ್ಥೆಗಳು ಸಲ್ಲಿಸಿರುವ ಪ್ರಾಯೋಜನೆಗಳಿಗೆ ಅನುಮೋದನ ನೀಡಲಾಗಿರುತ್ತದೆ.

ಮೇಲೆ ಓದಲಾದ (3)ರ ನಡವಳಿಯನ್ವಯ ದಿನಾಂಕ:04.10.2019ರಂದು ನಡೆದ 21ನೇ ರಾಜ್ಯ ಮಟ್ಟದ ಮಂಜೂರಾತಿ ಸಭೆಯಲ್ಲಿ ರೂ. 298.93 ಕೋಟಿಗಳಿಗೆ ವಿವಿಧ ಇಲಾಖೆ/ ಸಂಸ್ಥೆಗಳು ಸಲ್ಲಿಸಿರುವ ಪ್ರಾಯೋಜನೆಗಳಿಗೆ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ (4)ರ ಕೇಂದ್ರ ಸರ್ಕಾರದ ಪತ್ರದಲ್ಲಿ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯ 2019-20ನೇ ಸಾಲಿಗೆ ಕೇಂದ್ರ ಸರ್ಕಾರದ ಪಾಲು(60%) ರೂ.179.36 ಕೋಟಿಗಳ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (5)ರ ಸರ್ಕಾರದ ಆದೇಶದಲ್ಲಿ ಕೇಂದ್ರದ ಪಾಲಿನ ರೂ.49.15 ಕೋಟಿಗಳ ಅನುದಾನಕ್ಕೆ ಪೂರಕವಾಗಿ ರಾಜ್ಯದ ಪಾಲಿನ ಅನುದಾನ ರೂ.32.77 ಕೋಟಿಗಳನ್ನು ಸೇರಿ ಒಟ್ಟಾರೆ 81.92 ಕೋಟಿಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

ಮೇಲೆ ಓದಲಾದ (6)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಕೇಂದ್ರ ಸರ್ಕಾರವು 21ನೇ ರಾಜ್ಯ ಮಟ್ಟದ ಮಂಜೂರಾತಿ ಸಮಿತಿಯ ರೂ.298.93 ಕೋಟಿಗಳ ಅನುಮೋದನೆಯನ್ವಯ ಕೇಂದ್ರ ಸರ್ಕಾರವು ಬಾಕಿ ಉಳಿದ ಮೊದಲನೇ ಕಂತಿನ ಅನುದಾನವಾಗಿ ರೂ.40.53 ಕೋಟಿಗಳನ್ನು ಬಿಡುಗಡೆ ಮಾಡಿದ್ದು, ಸದರಿ ಅನುದಾನಕ್ಕೆ ರಾಜ್ಯದ ಪಾಲಿನ ಶೇ. 40ರಷ್ಟು ರೂ.27.02 ಕೋಟಿಗಳನ್ನು ಸೇರಿಸಿ, ಒಟ್ಟಾರೆ ರೂ.67.55 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 18 ಕೃಉಇ 2019, ಬೆಂಗಳೂರು, ದಿನಾಂಕ: 07.12.2019.**

ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಮೊದಲನೇ ಕಂತಿನ ಉಳಿಕೆ ರೂ.40.53 ಕೋಟಿಗಳ ಅನುದಾನಕ್ಕೆ ಪೂರಕವಾಗಿ ರಾಜ್ಯ ಸರ್ಕಾರದ ಪಾಲಿನ ಶೇ.40 ರಷ್ಟು ಅನುದಾನದ ರೂ.27.02 ಕೋಟಿಗಳನ್ನು ಸೇರಿಸಿ, ಒಟ್ಟು **ರೂ.67.55 ಕೋಟಿಗಳನ್ನು (ಅರವತ್ತೇಳು ಕೋಟಿ ಐವತ್ತೈದು ಲಕ್ಷ ರೂಪಾಯಿಗಳು ಮಾತ್ರ)** 2019-20ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-57 ರ ಅಡಿ ಈ ಕೆಳಕಂಡಂತೆ ಬಿಡುಗಡೆ ಮಾಡುತ್ತಾ, ಯೋಜನೆಯನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದೆ.

ರೂ.ಕೋಟಿಗಳಲ್ಲಿ

| ಅನುದಾನದ ವಿವರ | Grants-in-Aid-General (103) | Subsidies (106) | SCP | TSP | Total |
|---|---|---|---|---|---|
| ಕೇಂದ್ರದ ಪಾಲು (60%) | 20.16 | 11.65 | 6.10 | 2.62 | 40.53 |
| ರಾಜ್ಯದ ಪಾಲು (40%) | 13.44 | 7.76 | 4.07 | 1.75 | 27.02 |
| ಒಟ್ಟು | 33.60 | 19.41 | 10.17 | 4.37 | 67.55 |

..3

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ/01/ಟಿಎಫ್ ಪಿ/2019, ದಿನಾಂಕ: 04.07.2019ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 16 ಆಂ.ಆ.ಸ 2019, ದಿನಾಂಕ: 04.12.2019ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

07/12/2019
(ಶಕುಂತಲಾ ಚೌಗಲಾ)
ಸರ್ಕಾರದ ಉಪ ಕಾರ್ಯದರ್ಶಿ-1
ಕೃಷಿ ಇಲಾಖೆ.

<u>ಇವರಿಗೆ:-</u>

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ& ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ.
7. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
8. ಆಯುಕ್ತರು, ತೋಟಗಾರಿಕೆ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
10. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
11. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
15. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

# ಕರ್ನಾಟಕ ಸರ್ಕಾರ

ಸಂಖ್ಯೆ: ಕೃಇ 18 ಕೃಉಇ 2019

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:10.12.2019

## ಸೇರ್ಪಡೆ ಆದೇಶ

**ವಿಷಯ:** "2019-20ನೇ ಸಾಲಿನ RKVY ಯೋಜನೆಯಡಿ ಮೊದಲನೇ ಕಂತಿನ ಉಳಿಕೆ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

******

ಸರ್ಕಾರದ ಆದೇಶ ಸಂಖ್ಯೆ: ಕೃಇ 18 ಕೃಉಇ 2019, ದಿನಾಂಕ:07-12-2019ರ ಆದೇಶ ಭಾಗದ ಕಂಡಿಕೆ 1ರ ನಂತರ ಈ ಕೆಳಕಂಡ ಕಂಡಿಕೆಯನ್ನು ಸೇರಿಸಿ ಓದಿಕೊಳ್ಳತಕ್ಕದ್ದು,

"THE GRANTS FOR THE DEPARTMENTS WILL BE RELEASED UNDER THE HEAD OF ACCOUNT NO:2401-00-800-1-57 TO THE CCO OF THE CONCERNED DEPARTMENTS/INSTITUTIONS/UNIVERSITIES. FURTHER, THE BILL SUBMITTED BY DRAWING OFFICERS OF THE DEPARTMENTS/INSTITUTIONS/UNIVERSITIES SHALL BE COUNTER SIGNED BY THE COMMISSIONER FOR AGRICULTURE, BENGALURU.

ಕೃಷಿ ನಿರ್ದೇಶಕರು ಕೇಂದ್ರ ಸರ್ಕಾರವು ಆಗ್ಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು."

ಉಳಿದಂತೆ ಸದರಿ ಆದೇಶದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

10/12/19
(ಶಕುಂತಲಾ ಬೀಗಿಲ)
ಸರ್ಕಾರದ ಉಪ ಕಾರ್ಯದರ್ಶಿ-1
ಕೃಷಿ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01
2. ಪ್ರಧಾನ ಮಹಾಲೇಖಪಾಲರು ( ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ.
7. ಕೃಷಿ ಆಯುಕ್ತರು/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.

8. ಆಯುಕ್ತರು, ತೋಟಗಾರಿಕೆ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
10. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
11. ನಿರ್ದೇಶಕರು, TNMC, ಖನಿಜ ಭವನ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
13. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ – 4&5), ಆರ್ಥಿಕ ಇಲಾಖೆ, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
15. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.